# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉತ್ತರ ಕನ್ನಡ ಮತ್ತು ಬಳ್ಳಾರಿ ಜಿಲ್ಲಾ ಪಂಚಾಯತಿ ಹಾಗೂ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಯೋಜನೆ ಇಲಾಖೆಯಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳು ಭರ್ತಿಯಾದ್ದರಿಂದ ವೇತನ ಹಾಗೂ ವರ್ಷದ ಮಧ್ಯಂತರದಲ್ಲಿ ನಿವೃತ್ತರಾಗುವ ಅಧಿಕಾರಿ/ಸಿಬ್ಬಂದಿಯವರ 15 ದಿನಗಳ ಗಳಿಕೆ ರಜೆ ನಗದೀಕರಣಕ್ಕಾಗಿ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಉತ್ತರ ಕನ್ನಡ ಮತ್ತು ಬಳ್ಳಾರಿ ಜಿಲ್ಲಾ ಪಂಚಾಯತಿ ಮುಖ್ಯ ಲೆಕ್ಕಾಧಿಕಾರಿಗಳು ಹಾಗೂ ಮೊಳಕಾಲ್ಮೂರು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ಉತ್ತರ ಕನ್ನಡ ಮತ್ತು ಬಳ್ಳಾರಿ ಜಿಲ್ಲಾ ಪಂಚಾಯತಿ ಹಾಗೂ ಅವುಗಳ ವ್ಯಾಪ್ತಿಯ ಯೋಜನಾ ಇಲಾಖೆ ಮತ್ತು ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕು ಪಂಚಾಯತಿಯಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಹಾಗೂ ವರ್ಷದ ಮಧ್ಯಂತರದಲ್ಲಿ ನಿವೃತ್ತರಾಗುವ ಅಧಿಕಾರಿ/ಸಿಬ್ಬಂದಿಯವರ 15ದಿನಗಳ ಗಳಿಕೆ ರಜೆ ನಗದೀಕರಣಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತಿ ಕಾರ್ಯಕ್ರಮದಡಿ ಕೋರಿರುವ ರೂ.23.97ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ಕೋರಿರುವ ರೂ.71.76ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–197–1–10–300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 213 ವೆಚ್ಚ 6/2020(ಇ) ದಿನಾಂಕ: 15ನೇ ಜುಲೈ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ/ನಿವೃತ್ತ ಸಿಬ್ಬಂದಿಯವರ ಗಳಿಕೆ ರಜೆ ನಗದೀಕರಣ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5 ಲೆಕ್ಕ ಶೀರ್ಷಿಕೆಯಡಿ ಕಾಲಂ 6ರನ್ವಯ ಒಟ್ಟು ರೂ.95.73ಲಕ್ಷ (ರೂಪಾಯಿ ತೊಂಬತ್ತೈದು ಲಕ್ಷದ ಎಪ್ಪತ್ಮೂರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515–00–197–1–10–300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| 1 | 2 | 3 | 4 | 5 | 6 |
| 1 | ಉತ್ತರ ಕನ್ನಡ | 2515–00–101–0–28–005 | 4.64 | 1414710458 | 4.64 |
| 2 | ಬಳ್ಳಾರಿ | 3451–00–101–0–26–005 | 19.33 | | 19.33 |
| 3 | ಮೊಳಕಾಲ್ಮೂರು | 2515–00–102–0–61–005 | 1414710472 | 71.76 | 71.76 |
| | ಒಟ್ಟು | | **23.97** | **71.76** | **95.73** |

<u>ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.</u>

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ./ಯೋಜನಾ ಇಲಾಖೆ
4. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ